ಕರ್ನಾಟಕ ಸರ್ಕಾರದ ನಡವಳಿಗಳು

**ವಿಷಯ:** ಶ್ರೀ ಭಾಸ್ಕರ್ ಹಂಡೆ, ನಿವೃತ್ತ ಪ್ರಧಾನ ವ್ಯವಸ್ಥಾಪಕರು, ಸಿಂಡಿಕೇಟ್ ಬ್ಯಾಂಕ್ ಇವರನ್ನು ಶ್ರೀ ಗುರುರಾಘವೇಂದ್ರ ಸಹಕಾರ ಬ್ಯಾಂಕ್ ನಿ., ಬೆಂಗಳೂರು, ಇದರ ಆಡಳಿತಾಧಿಕಾರಿಯಾಗಿ ನೇಮಿಸುವ ಕುರಿತು.

**ಓದಲಾಗಿದೆ:** ಸಹಕಾರ ಸಂಘಗಳ ನಿಬಂಧಕರ ಕಛೇರಿ ಪತ್ರ ಸಂಖ್ಯೆ:ಯುಬಿಸಿ-7/29ಎ-1/ಆಡಳಿತಾಧಿಕಾರಿ/2019-20, ದಿ:27.09.2023

***

**ಪ್ರಸ್ತಾವನೆ :**

ಮೇಲೆ ಓದಲಾದ ಸಹಕಾರ ಸಂಘಗಳ ನಿಬಂಧಕರ ಪತ್ರದಲ್ಲಿ, 2019ನೇ ಸಾಲಿನಲ್ಲಿ ಶ್ರೀ ಗುರುರಾಘವೇಂದ್ರ ಸಹಕಾರ ಬ್ಯಾಂಕ್ ನಿ., ಬೆಂಗಳೂರು, ಈ ಬ್ಯಾಂಕಿನ ಶಾಸನಾತ್ಮಕ ಪರಿವೀಕ್ಷಣೆ ಕೈಗೊಂಡ ಸಂದರ್ಭದಲ್ಲಿ ಬ್ಯಾಂಕಿನ ಚಟುವಟಿಕೆಗಳಲ್ಲಿ ಗಂಭೀರ ಸ್ವರೂಪದ ಲೋಪದೋಷಗಳು ಕಂಡುಬಂದ ಹಿನ್ನಲೆಯಲ್ಲಿ ಭಾರತೀಯ ರಿಸರ್ವ್ ಬ್ಯಾಂಕ್ ನೀಡಿದ ಸಲಹೆ ಮೇರೆಗೆ ಕರ್ನಾಟಕ ಸಹಕಾರ ಸಂಘಗಳ ಅಧಿನಿಯಮ 1959ರ ಪ್ರಕರಣ 30(6)ರಡಿಯಲ್ಲಿ ಬ್ಯಾಂಕಿನ ಆಡಳಿತ ಮಂಡಳಿಯನ್ನು ರದ್ದುಪಡಿಸಿ ಆಡಳಿತ ಮಂಡಳಿ ಸ್ಥಾನದಲ್ಲಿ ಒಂದು ವರ್ಷದ ಅವಧಿಗೆ ಭಾರತೀಯ ರಿಸರ್ವ್ ಬ್ಯಾಂಕಿನ ಅಭಿಪ್ರಾಯ ಮತ್ತು ಮಾನ್ಯ ಉಚ್ಚ ನ್ಯಾಯಾಲಯದ ಸೂಚನೆ ಮೇರೆಗೆ ಶ್ರೀ ಆರ್.ಅಶೋಕನ್, ನಿವೃತ್ತ ಜನರಲ್ ಮ್ಯಾನೇಜರ್, ಕೆನರಾ ಬ್ಯಾಂಕ್ ಇವರನ್ನು ಆಡಳಿತಾಧಿಕಾರಿಯನ್ನಾಗಿ ನೇಮಕ ಮಾಡಲಾಗಿದ್ದು, ಸದರಿ ಆಡಳಿತಾಧಿಕಾರಿ ಅವಧಿಯನ್ನು ದಿ:16.05.2023ರ ಆದೇಶದ ರೀತ್ಯಾ ದಿನಾಂಕ:17.05.2024ರವರೆಗೆ ವಿಸ್ತರಿಸಿ ಆದೇಶಿಸಲಾಗಿತ್ತು.

ಮುಂದುವರೆದು, ಆಡಳಿತಾಧಿಕಾರಿಯವರು ಅನಾರೋಗ್ಯ ನಿಮಿತ್ತ ಬ್ಯಾಂಕಿನ ಆಡಳಿತಾಧಿಕಾರಿ ಹುದ್ದೆಯಿಂದ ಬಿಡುಗಡೆಗೊಳಿಸುವಂತೆ ಕೋರಿದ್ದರ ಹಿನ್ನಲೆಯಲ್ಲಿ, ಆರ್‌ಬಿಐ ಸೂಚಿಸಿರುವ ಶ್ರೀ ಭಾಸ್ಕರ್ ಹಂಡೆ, ನಿವೃತ್ತ ಪ್ರಧಾನ ವ್ಯವಸ್ಥಾಪಕರು, ಸಿಂಡಿಕೇಟ್ ಬ್ಯಾಂಕ್ ಹಾಗೂ ಶ್ರೀ ಇ.ಎನ್.ರಂಗನಾಥನ್, ನಿವೃತ್ತ ಪ್ರಧಾನ ವ್ಯವಸ್ಥಾಪಕರು, ಕೆನರಾ ಬ್ಯಾಂಕ್ ಈ ಇಬ್ಬರಲ್ಲಿ ಒಬ್ಬರನ್ನು ಆಯ್ಕೆ ಮಾಡಿ ಸೂಕ್ತ ಆದೇಶ ಹೊರಡಿಸುವಂತೆ ಕೋರಿ ಪ್ರಸ್ತಾವನೆ ಸಲ್ಲಿಸಿರುತ್ತಾರೆ.

ಪ್ರಸ್ತಾವನೆಯನ್ನು ಕೂಲಂಕಷವಾಗಿ ಪರಿಶೀಲಿಸಿ, ಈ ಕೆಳಕಂಡಂತೆ ಆದೇಶಿಸಿದೆ.

**ಸರ್ಕಾರದ ಆದೇಶ ಸಂಖ್ಯೆ: ಸಿಒ 54 ಸಿಆರ್‌ಸಿ 2023, ಬೆಂಗಳೂರು, ದಿನಾಂಕ:27.10.2023**

ಪ್ರಸ್ತಾವನೆಯಲ್ಲಿ ವಿವರಿಸಿರುವ ಅಂಶಗಳ ಹಿನ್ನಲೆಯಲ್ಲಿ, ಶ್ರೀ ಭಾಸ್ಕರ್ ಹಂಡೆ, ನಿವೃತ್ತ ಪ್ರಧಾನ ವ್ಯವಸ್ಥಾಪಕರು, ಸಿಂಡಿಕೇಟ್ ಬ್ಯಾಂಕ್ ಇವರನ್ನು ದಿನಾಂಕ:26.10.2023 ರಿಂದ 17.05.2024ರವರೆಗೆ ಶ್ರೀ ಗುರುರಾಘವೇಂದ್ರ ಸಹಕಾರ ಬ್ಯಾಂಕ್ ನಿ., ಬೆಂಗಳೂರು, ಇದರ ಆಡಳಿತಾಧಿಕಾರಿಯಾಗಿ ನೇಮಿಸಿ ಆದೇಶಿಸಿದೆ.

ಕರ್ನಾಟಕ ರಾಜ್ಯಪಾಲರ ಆದೇಶಾನುಸಾರ
ಮತ್ತು ಅವರ ಹೆಸರಿನಲ್ಲಿ

27/x/23

(ಎ.ಸಿ.ದಿವಾಕರ್)
ವಿಶೇಷ ಕರ್ತವ್ಯಾಧಿಕಾರಿ ಹಾಗೂ
ಪದನಿಮಿತ್ತ ಸರ್ಕಾರದ ಜಂಟಿ ಕಾರ್ಯದರ್ಶಿ
ಸಹಕಾರ ಇಲಾಖೆ

27/10

**ಇವರಿಗೆ:**

ಸಂಕಲನಕಾರರು, ಕರ್ನಾಟಕ ರಾಜ್ಯಪತ್ರ, ಬೆಂಗಳೂರು ಇವರಿಗೆ ಕರ್ನಾಟಕ ರಾಜ್ಯ ಪತ್ರದಲ್ಲಿ ಕೂಡಲೇ ಪ್ರಕಟಿಸಿ, ಅದರ 50 ಪ್ರತಿಗಳನ್ನು ಒದಗಿಸಲು ಕೋರಿದೆ.

**ಪ್ರತಿಗಳು:**

Scanned with OKEN Scanner

ಶ್ರೀ ಗುರು ರಾಘವೇಂದ್ರ ಸಹಕಾರ ಬ್ಯಾಂಕ್ ನಿಯಮಿತ
SRI GURU RAGHAVENDRA SAHAKARA BANK NIYAMITHA
# 15, Subbarama Chetty Road, Nettakallappa Circle, Basavanagudi, Bangalore - 560 004.
Phone : 26620380, 26620379 ■ Fax : 080-26506895 ■ E-mail : sgrsbn.bank@gmail.com
Website : www.raghavendrabank.com

Ref: SGRSBN/Adm/H-210/1889/2023-24 Date: 09-11-2023

**ಸಹಕಾರ ಸಂಘಗಳ ನಿಬಂಧಕರ ಕಛೇರಿ,**
ನಂ. 1, ಅಲಿ ಅಸ್ಕರ್ ರಸ್ತೆ,
ಬೆಂಗಳೂರು-560 052.

ಮಾನ್ಯರೆ,

**ವಿಷಯ : ಶ್ರೀ ಗುರು ರಾಘವೇಂದ್ರ ಸಹಕಾರ ಬ್ಯಾಂಕ್ ನಿಯಮಿತ, ಇದರ ಆಡಳಿತಾಧಿಕಾರಿಯಾಗಿ ನೇಮಕಗೊಂಡಿರುವ ಬಗ್ಗೆ.**

**ಉಲ್ಲೇಖ : ನೇಮಕಾತಿ ಪತ್ರ ಸಂಖ್ಯೆ ಆರ್.ಸಿ.ಎಸ್/ಯು.ಬಿ.ಸಿ-7/29ಎ-1/ಆಡಳಿತಾಧಿಕಾರಿ/2019-20, ದಿನಾಂಕ 27-09-2023.**

ಮೇಲೆ ತಿಳಿಸಿದ ವಿಷಯಕ್ಕೆ ಸಂಬಂಧಿಸಿದಂತೆ ತಮ್ಮ ಪತ್ರ ಸಂಖ್ಯೆ **ಆರ್.ಸಿ.ಎಸ್/ಯು.ಬಿ.ಸಿ-7/29ಎ-1/ಆಡಳಿತಾಧಿಕಾರಿ/2019-20 ದಿನಾಂಕ 27-09-2023** ಆದೇಶದಂತೆ ದಿನಾಂಕ 09-11-2023 ರ ಪೂರ್ವಾಹ್ನ ಶ್ರೀ ಗುರು ರಾಘವೇಂದ್ರ ಸಹಕಾರ ಬ್ಯಾಂಕ್ ನಿಯಮಿತ ಇದರ ಆಡಳಿತಾಧಿಕಾರಿಯಾಗಿ ಅಧಿಕಾರ ವಹಿಸಿಕೊಂಡಿರುತ್ತೇನೆ. ಅಧಿಕಾರ ವಹಿಸಿಕೊಂಡಿರುವ ಪತ್ರದ ಪ್ರತಿಯನ್ನು ಇದರೊಂದಿಗೆ ಲಗತ್ತಿಸಿದ್ದೇನೆ.

B 9/11/2023

(ಶ್ರೀ ಭಾಸ್ಕರ್ ಹಂಡೆ)
ಆಡಳಿತಾಧಿಕಾರಿಗಳು

**ಪ್ರತಿಯನ್ನು :-**

1) ಪ್ರಧಾನ ಮಹಾಲೇಖಪಾಲಕರು, (ಲೆಕ್ಕ ಪತ್ರ ಮತ್ತು ಹಕ್ಕುದಾರಿ) ಕರ್ನಾಟಕ ರಾಜ್ಯ, ಬೆಂಗಳೂರು ರವರಿಗೆ ಗೌರವಪೂರ್ವಕವಾಗಿ ಸಲ್ಲಿಸಿದೆ.
2) ಸರ್ಕಾರದ ಪ್ರಧಾನ ಕಾರ್ಯದರ್ಶಿಗಳು, ಸಹಕಾರ ಇಲಾಖೆ, ಬಹುಮಹಡಿ ಕಟ್ಟಡ, ಬೆಂಗಳೂರು ರವರಿಗೆ ಗೌರವಪೂರ್ವಕವಾಗಿ ಸಲ್ಲಿಸಿದೆ.
3) ಸಹಕಾರ ಸಂಘಗಳ ನಿಬಂಧಕರು, ಕರ್ನಾಟಕ ರಾಜ್ಯ, ಬೆಂಗಳೂರು ರವರಿಗೆ ಗೌರವಪೂರ್ವಕವಾಗಿ ಸಲ್ಲಿಸಿದೆ.
4) ಮುಖ್ಯ ಪ್ರಧಾನ ವ್ಯವಸ್ಥಾಪಕರು, ಭಾರತೀಯ ರಿಜರ್ವ್ ಬ್ಯಾಂಕ್, ಬೆಂಗಳೂರು
5) ಶ್ರೀ ಗುರು ರಾಘವೇಂದ್ರ ಸಹಕಾರ ಬ್ಯಾಂಕ್ ನಿಯಮಿತ, ಬೆಂಗಳೂರು, ಇದರ ಇ.ಎಸ್.ಟಿ ಮತ್ತು ಆಡಳಿತಾಧಿಕಾರಿಗಳ ಕಡತಕ್ಕೆ
6) ವಿಶೇಷ ಕರ್ತವ್ಯಾಧಿಕಾರಿ ಹಾಗೂ ಪದನಿಮಿತ್ತ ಸರ್ಕಾರದ ಜಂಟಿ ಕಾರ್ಯದರ್ಶಿ, ಸಹಕಾರ ಇಲಾಖೆ, ಬಹುಮಹಡಿ ಕಟ್ಟಡ, ಬೆಂಗಳೂರು ರವರಿಗೆ ಗೌರವಪೂರ್ವಕವಾಗಿ ಸಲ್ಲಿಸಿದೆ.